**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ**
**ತಳಮಹಡಿ, ಸಿಟಿ ಸಿವಿಲ್ ನ್ಯಾಯಾಲಯ ಸಂಕೀರ್ಣ, ಬೆಂಗಳೂರು-560 009.**

**ಅಧಿಸೂಚನೆ ಸಂಖ್ಯೆ: ಎಡಿಎಂ/150/2018 ದಿನಾಂಕ: 12.12.2018**

ವಿಷಯ: ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ

ಉಲ್ಲೇಖ: ಮಾನ್ಯ ಉಚ್ಚನ್ಯಾಯಾಲಯದ ಪತ್ರ ಸಂಖ್ಯೆ LCA/II/128/2012, ದಿನಾಂಕ 18.09.2018

---

ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯ ಘಟಕದ ನ್ಯಾಯಾಲಯಗಳಲ್ಲಿ ಖಾಲಿ ಇರುವ ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ **ಆನ್‌ಲೈನ್ ಮೂಲಕ** ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/bangalorerural** ಮೂಲಕ ಆನ್‌ಲೈನ್ ನಲ್ಲಿ ದಿನಾಂಕ: **14.12.2018** ರಿಂದ **16.01.2019** ರ ವರೆಗೆ ಮಾತ್ರ ಸಲ್ಲಿಸತಕ್ಕದ್ದು.

**ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ನಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16.01.2019**

1. **ಹುದ್ದೆಗಳ ಸಂಖ್ಯೆ: 4 (01 ಹಿಂಬಾಕಿ ಹುದ್ದೆ ಸೇರಿದಂತೆ)**

2. **ವೇತನ ಶ್ರೇಣಿ** – ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು

Scanned with CamScanner

3. ಹುದ್ದೆಗಳ ವರ್ಗೀಕರಣಃ

ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳು

| ವರ್ಗೀಕರಣ | ಅಂಗವಿಕಲ | ಒಟ್ಟು |
|---|---|---|
| ಪ್ರವರ್ಗ 2ಎ | 1 | 1 |
| ಒಟ್ಟು | 1 | 1 |

ಈ 01 ಹುದ್ದೆ ದೃಷ್ಟಿಮಾಂದ್ಯ (blindness or low vision) ಅಭ್ಯರ್ಥಿಗಳಿಗೆ ಮೀಸಲಿರಿಸಿದ್ದು ಸದರಿ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 128 ಸೆನೆನಿ 2006 ದಿನಾಂಕ 01.08.2009 ರಂತೆ ಬೇರೆ ಅಂಗವಿಕಲತೆಯುಳ್ಳ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

ಹೊಸ ಖಾಲಿ ಹುದ್ದೆಗಳು:

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲ | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | 1 | - | - | - | - | - | - | 1 |
| ಪ್ರವರ್ಗ 3ಬಿ | - | 1 | - | - | - | - | - | 1 |
| ಸಾಮಾನ್ಯ | - | 1 | - | - | - | - | - | 1 |
| ಒಟ್ಟು | 1 | 2 | - | - | - | - | - | 3 |

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಡಬಹುದು.

4. ಶೈಕ್ಷಣಿಕ ವಿದ್ಯಾರ್ಹತೆಃ

(ಅ) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು

(ಆ) ಕನ್ನಡ ಮತ್ತು ಇಂಗ್ಲಿಷ್ ಕಿರಿಯದರ್ಜೆಯ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು

ಇ) ಗಣಕಯಂತ್ರದ ಸಾಮಾನ್ಯ / ಮೂಲ ಜ್ಞಾನ ಇರುವವರಿಗೆ ಆದ್ಯತೆ ನೀಡಲಾಗುವುದು

Scanned with CamScanner

## 5. ವಯೋಮಿತಿಃ

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂತೆಃ

| | | |
|---|---|---|
| ಕನಿಷ್ಠ ವಯೋಮಿತಿ ಃ | 18 ವರ್ಷ | |
| ಗರಿಷ್ಠ ವಯೋಮಿತಿ ಃ | ಸಾಮಾನ್ಯ ವರ್ಗ | - 35 ವರ್ಷ |
| | ಪ್ರವರ್ಗ 2ಎ ಃ 2ಬಿ ಃ 3ಎ ಃ 3ಬಿ | - 38 ವರ್ಷ |
| | ಪ.ಜಾ ಃ ಪ.ಪಂ. ಃ ಪ್ರವರ್ಗ-1 | - 40 ವರ್ಷ |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

## 6. ಆಯ್ಕೆ ವಿಧಾನಃ

(1) ಈ ಕೆಳಕಂಡ ನಿಯಮಗಳ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

(ಅ) ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977

(ಆ) ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು, 1982

(ಇ) ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007

(2) ಆಯ್ಕೆಗೆ ಅರ್ಹತಾ ಪರೀಕ್ಷೆ ಮತ್ತು ಸಂದರ್ಶನ ಈ ಕೆಳಕಂಡಂತೆ ನಡೆಸಲಾಗುವುದು.

(ಅ) ನೇಮಕಾತಿ ಪ್ರಾಧಿಕಾರದಿಂದ ನೇಮಿಸಲಾದ ಪರೀಕ್ಷಕರು 15 ನಿಮಿಷಗಳ ಅವಧಿ ಉಕ್ತಲೇಖನವನ್ನು ನೀಡುವರು ಮತ್ತು ಅಭ್ಯರ್ಥಿಯು ಆ ಉಕ್ತಲೇಖನವನ್ನು ಬೆರಳಚ್ಚು ಮಾಡಬೇಕು.

(ಆ) ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಹೊಂದಿದ್ದು, ಉತ್ತೀರ್ಣರಾಗಲು ಕನಿಷ್ಠ 50 ಅಂಕಗಳನ್ನು ನಿಗದಿಪಡಿಸಿರುತ್ತದೆ.

(ಇ) ನಿಗದಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಅರ್ಹತಾ ಪರೀಕ್ಷೆಯ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಆಧಾರದ ಮೇಲೆ 01 (ಒಂದು) ಖಾಲಿ ಹುದ್ದೆಗೆ 05

Scanned with CamScanner

(ಐದು) ಅಭ್ಯರ್ಥಿಗಳ ಪ್ರಮಾಣದಲ್ಲಿ ಅಧಿಸೂಚನೆಯಲ್ಲಿ ಪ್ರಕಟಪಡಿಸಲಾದ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನವು 05 ಅಂಕಗಳನ್ನು ಒಳಗೊಂಡಿರುತ್ತದೆ.

(3) ಯಾವುದೇ ಪ್ರವರ್ಗದಲ್ಲಿ ಮಹಿಳಾ/ಗ್ರಾಮೀಣ/ಕನ್ನಡ ಮಾಧ್ಯಮ/ಮಾಜಿ ಸೈನಿಕ/ ಅಂಗವಿಕಲ (ವಿಕಲಚೇತನ)/ಯೋಜನಾ ನಿರಾಶ್ರಿತ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಅವರಿಗೆ ಮೀಸಲಿದ್ದ ಹುದ್ದೆಗಳನ್ನು ಆಯಾ ಪ್ರವರ್ಗದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

## 7. ಪರಿವೀಕ್ಷಣಾ ಅವಧಿ

ಆಯ್ಕೆಯಾದ ಅಭ್ಯರ್ಥಿಗಳನ್ನು 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು. ಕರ್ನಾಟಕ ಸಿವಿಲ್ ಸೇವೆಗಳು (ಪರಿವೀಕ್ಷಣಾ) ನಿಯಮಗಳು, 1977 ಅನ್ವಯವಾಗುತ್ತವೆ.

## 8. ನಿಗದಿತ ಅರ್ಜಿ ಶುಲ್ಕ/ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | ರೂ. 200/- |
| ಪ.ಜಾ., ಪ.ಪಂ., ಪ್ರವರ್ಗ-1 ಅಭ್ಯರ್ಥಿಗಳಿಗೆ ಹಾಗೂ ಅಂಗವಿಕಲ (ವಿಕಲಚೇತನ) ಅಭ್ಯರ್ಥಿಗಳಿಗೆ | ರೂ. 100/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/bangalorerural** ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **online payment through net banking / credit card / debit card/ Challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **Print Out** ಅನ್ನು ಪಡೆದುಕೊಂಡು ಎಸ್.ಬಿ.ಐ.ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮಾಂಡ್ ಡ್ರಾಫ್ಟ್, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

Scanned with CamScanner

9. ಅಭ್ಯರ್ಥಿಗಳು **ONLINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:

(1) ಅಭ್ಯರ್ಥಿಗಳು ಅರ್ಜಿಯನ್ನು **ONLINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(2) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

(3) ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

(4) ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು:

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ **5cm** ಉದ್ದ **x 3.6cm** ಅಗಲವುಳ್ಳದ್ದಾಗಿರಬೇಕು ಮತ್ತು **50kb** ಅಳತೆಯದ್ದಾಗಿರಬೇಕು ಹಾಗೂ ಅದು **jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ **(2.5cm** ಉದ್ದ**x7.5cm** ಅಗಲವುಳ್ಳದ್ದಾಗಿರಬೇಕು ಮತ್ತು **26kb** ಅಳತೆಯದ್ದಾಗಿರಬೇಕು ಹಾಗೂ **jpg** ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

(5) ತದನಂತರ ಅಭ್ಯರ್ಥಿಯು **ONLINE** ಅರ್ಜಿಯಲ್ಲಿ ಕೇಳಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಹಾಜರು ಪಡಿಸತಕ್ಕದ್ದು.

Scanned with CamScanner

(6) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ;

(7) ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ **https://districts.ecourts.gov.in/bangalorerural** ನಲ್ಲಿ ಕೊನೆಯ ದಿನಾಂಕ 16.01.2019 ವರೆಗೂ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

(ಅ) **ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು / ಸಲ್ಲಿಸಲು ದಿನಾಂಕ 16.01.2019 ರ ರಾತ್ರಿ 11.59ರ ವರೆಗೆ ಅವಕಾಶವಿರುತ್ತದೆ.**

(ಆ) **ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ 17.01.2019 ಕಡೆಯ ದಿನಾಂಕವಾಗಿದ್ದು, ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.**

(8) ಅರ್ಹತಾ ಪರೀಕ್ಷೆಯ ವೇಳಾಪಟ್ಟಿ ಮತ್ತು ಸಂದರ್ಶನದ ವೇಳಾಪಟ್ಟಿಯನ್ನು ಈ ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/bangalorerural** ನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ;

(9) ಅರ್ಹ ಅಭ್ಯರ್ಥಿಗಳಿಗೆ **SMS** ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ; ಅರ್ಹ ಅಭ್ಯರ್ಥಿಗಳು **https://districts.ecourts.gov.in/bangalorerural** ವೆಬ್‌ಸೈಟ್‌ನಿಂದ ಅರ್ಹತಾ ಪರೀಕ್ಷೆಯ ಪ್ರವೇಶಪತ್ರವನ್ನು ಮತ್ತು ಸಂದರ್ಶನದ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವುದು. **ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ** (ವೋಟರ್ ಐಡಿ/ಆಧಾರ್ ಕಾರ್ಡ್/ಡ್ರೈವಿಂಗ್ ಲೈಸೆನ್ಸ್/ ಪ್ಯಾನ್ ಕಾರ್ಡ್/ಪಾಸ್‌ಪೋರ್ಟ್) **ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಹಾಜರಾಗತಕ್ಕದ್ದು.**

Scanned with CamScanner

## 10. ಇತರೆ ಸೂಚನೆಗಳು

(1) ಅಭ್ಯರ್ಥಿಗಳು ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು:

(ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ

(ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ

(ಇ) ಎಸ್.ಎಸ್.ಎಲ್.ಸಿ. ಅಂಕಪಟ್ಟಿ

(ಈ) ಕನ್ನಡ ಮತ್ತು ಇಂಗ್ಲಿಷ್ ಕಿರಿಯದರ್ಜೆ ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು

(ಉ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು.

(ಊ) ಗ್ರಾಮೀಣ/ಕನ್ನಡ ಮಾಧ್ಯಮ/ಮಾಜಿ ಸೈನಿಕ/ಅಂಗವಿಕಲ (ವಿಕಲಚೇತನ)/ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳು.

(ಋ) ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕಃ 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆಃ ಸಿಆಸುಇ 115 ಸೇನೆನಿ 2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ/ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ)

(ಎ) ಮಾಜಿ ಸೈನಿಕ ವರ್ಗದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ.

(ಏ) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರ ಹಾಗೂ ಶಾಲಾ ನಡತೆ ಪ್ರಮಾಣಪತ್ರಗಳು.

(ಐ) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿಯೇ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿರುವ ನಿರಾಕ್ಷೇಪಣ ಪ್ರಮಾಣಪತ್ರ.

Scanned with CamScanner

(2) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

(3) ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ/ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

(4) ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

(5) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

(ಪಿ. ಕೃಷ್ಣ ಭಟ್)
ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

Scanned with CamScanner